ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಮೂರನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಶುಕ್ರವಾರ, ದಿನಾಂಕ 24ನೇ ಜನವರಿ, 2014
(ಸಮಯ: ಬೆಳಗ್ಗೆ 10.00 ಗಂಟೆಗೆ)

-----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಮೊದಲನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಮೊದಲನೇ ಪಟ್ಟಿ

2. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

"2014ರ ಜನವರಿ 22ರಂದು ವಿಧಾನಮಂಡಲದ ಉಭಯ ಸದನಗಳ ಸದಸ್ಯರನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನಸಭೆಯ ಸದಸ್ಯರಾದ ನಾವು ಘನತೆವೆತ್ತ ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ಶ್ರೀ ಬಸವರಾಜ ರಾಯರೆಡ್ಡಿ ಅವರು ಸೂಚಿಸುವುದು.

ಶ್ರೀ ಕೆ. ಶಿವಮೂರ್ತಿ ಅವರು ಅನುಮೋದಿಸುವುದು.

3. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಹೆಚ್.ಡಿ. ರೇವಣ್ಣ ಅವರು ಹೊಳೆನರಸೀಪುರ ತಾಲ್ಲೂಕು ಕಸಬಾ ಹೋಬಳಿ ದೊಡ್ಡಕಾಡನೂರು ವೃತ್ತದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಗ್ರಾಮಲೆಕ್ಕಾಧಿಕಾರಿ ಭೂ ದಾಖಲೆಗಳನ್ನು ತಿದ್ದಿ ಕಾನೂನು ಬಾಹಿರವಾಗಿ ಬೇನಾಮಿ ಹೆಸರಿನಲ್ಲಿ ಸುಣ್ಣಕಲ್ಲು ಗ್ರಾಮದಲ್ಲಿ ಜಮೀನುಗಳನ್ನು ಅಕ್ರಮವಾಗಿ ಖರೀದಿಸಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

ಪು.ತಿ.ನೋ.,

2. ಶ್ರೀ ಎನ್. ಚಲುವರಾಯಸ್ವಾಮಿ ಮತ್ತು ಶ್ರೀ ಹೆಚ್.ಡಿ. ರೇವಣ್ಣ ಅವರುಗಳು ಹೊಳೆನರಸೀಪುರ ತಾಲ್ಲೂಕಿನ ಪಡುವಲಹಿಪ್ಪೆ ಸಮುದಾಯ ಆಸ್ಪತ್ರೆ ಮತ್ತು ಹರದನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರ ಕೊರತೆಯಿಂದ ಸಾರ್ವಜನಿಕರಿಗೆ ತೊಂದರೆಯುಂಟಾಗುತ್ತಿರುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

3. ಶ್ರೀ ಹೆಚ್. ಆರ್. ಅಲಗೂರ (ರಾಜು) ಅವರು ಟಿಪ್ಪು ಸುಲ್ತಾನರ ಜನ್ಮ ದಿನೋತ್ಸವವನ್ನು ಸರ್ಕಾರಿ ರಜೆಯನ್ನಾಗಿ ಘೋಷಣೆ ಮಾಡಿ ಸರ್ಕಾರದ ವತಿಯಿಂದ ಆಚರಿಸುವ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರ ಗಮನ ಸಳೆಯುವುದು.

4. ಶ್ರೀ ಈ. ತುಕಾರಾಂ ಅವರು ಬಳ್ಳಾರಿ ಜಿಲ್ಲೆಯ ಸಂಡೂರು ತಾಲ್ಲೂಕಿನ ರಾಷ್ಟ್ರೀಯ ಹೆದ್ದಾರಿ 40ರಲ್ಲಿ ಬರುವ ಕೂಡ್ಲಿಗಿ-ಸಂಡೂರು-ತೋರಣಗಲ್ ನಡುವಿನ ರಸ್ತೆ ಅಭಿವೃದ್ಧಿ ಕಾಮಗಾರಿಯು ಪೂರ್ಣಗೊಳ್ಳದೆ ಸಾರ್ವಜನಿಕರಿಗೆ ತೊಂದರೆಯುಂಟಾಗಿರುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸಳೆಯುವುದು.

ಪಿ.ಓಂಪ್ರಕಾಶ
ಕಾರ್ಯದರ್ಶಿ

Raj N

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(www.kar.nic.in/kla)